**<u>ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧನ್ಯಾದಂಃ ನ್ಯಾಯಾಲಯ, ಮದ್ದೂರು.</u>**

**<u>ಸಿಸಿ 1159/2015</u>**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಡಿ ತಿಮ್ಮಯ್ಯ | ಚಾ.ಸಾ-10 |
| ತಂದೆಯ ಹೆಸರು | - | ದಾಸೇಗೌಡ | ಪ್ರಾ.ಸಾ-6 |
| ವಯಸ್ಸು | - | 76 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸಸ್ಥಳ | - | ವೈದ್ಯನಾಥಪುರ, ಮದ್ದೂರು ತಾಃ | |

ದಿನಾಂಕಃ 28-07-2023 ರಂದು ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ:ಅಭಿಯೋಜನೆಯ ಪರಃ ಎಪಿಪಿ ಯವರಿಂದ:</u>**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ-5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5 ಎ ಎಂದು ಗುರುತಿಸಲಾಯಿತು. ಪೋಲೀಸರು ಜನರಲ್ ಪವರ್ ಆಫ್ ಅಟಾರ್ನಿಯನ್ನು ವಶಪಡಿಸಿಕೊಳ್ಳುತ್ತಿದ್ದೇವೆ ಇದಕ್ಕೆ ಸಹಿ ಮಾಡಿ ಎಂದು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ. ಸದರೀ ದಾಖಲೆಗೆ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ಮಹಜರ್ ನ್ನು ಬೆಳಿಗ್ಗ 11.00 ಗಂಟೆಗೆ ಮಾಡಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದಃ</u>**

ದಿನಾಂಕಃ 09.05.2012 ರಂದು, ಮದ್ದೂರು ಪೋಲೀಸ್ ಠಾಣೆಯಲ್ಲಿ ನಿಮ್ಮ ಮತ್ತು ಚಾ.ಸಾ. 11 ರವರ ಸಮಕ್ಷಮದಲ್ಲಿ ಮಹಜರ್ ಕ್ರಮವನ್ನು ಜರುಗಿಸಿರುತ್ತಾರೆಂದರೆ ನನಗೆ ಗೊತ್ತಿಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು: ಶ್ರೀ ವಿ ಆರ್ ರವರಿಂದ</u>**

ಪೋಲೀಸರು ನನ್ನ ಸಮಕ್ಷಮ ಜಿ ಪಿ ಎ ಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ, ಅದನ್ನು ಯಾರು ಯಾರಿಗೆ ಬರೆದುಕೊಟ್ಟಿದ್ದಾರೆಂದು ನನಗೆ ಗೊತಿತಲ್ಲ. ನಿ.ಪಿ. *5* ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ನೀವು ಯಾವ ಪ್ರಕರಣದಲ್ಲಿ ಸಾಕ್ಷಿ ನುಡಿಯುತ್ತಿದ್ದೀರಿ ಎಂದು ನಿಮಗೆ ಗೊತ್ತಿಲ್ಲ ಎಂದರೆ ಸರಿ.

**<u>ಮರು ವಿಚಾರಣೆ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ಮತ್ತು
ಜೆ.ಎಂ.ಎಫ್.ಸಿ. ನ್ಯಾಯಾಧೀಶರು, ಮದ್ದೂರು.

ಸಾಕ್ಷಿ ಸಹಿಃ